# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 942
ಸದಸ್ಯರ ಹೆಸರು : ಶ್ರೀ ಶರವಣ ಟಿ.ಎ.
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 13.12.2023.
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಸರ್ಕಾರಿ ಭೂಮಿ ಒತ್ತುವರಿ ಬಗ್ಗೆ ಬಂದಿರುವ ದೂರುಗಳು ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮತ್ತು ವರ್ಷಾವಾರು ಮಾಹಿತಿ ನೀಡುವುದು) | ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಸರ್ಕಾರಿ ಭೂಮಿ ಒತ್ತುವರಿ ಸಂಬಂಧ ಪ್ರಕರಣಗಳ ವಿವರ ಈ ಕೆಳಕಂಡಂತಿದೆ;- |

| ಜಿಲ್ಲೆ | ತಾಲ್ಲೂಕು | ವರ್ಷವಾರು | | | ವಿಸ್ತೀರ್ಣ ಎ/ಗು |
|---|---|---|---|---|---|
| | | 2021 | 2022 | 2023 | |
| **ಬೆಂಗಳೂರು ನಗರ** | ಬೆಂಗಳೂರು. ಉತ್ತರ | 117 | 145 | 148 | 410 |
| | ಯಲಹಂಕ | 58 | 115 | 72 | 245 |
| | ಬೆಂಗಳೂರು ಪೂರ್ವ | 211 | 218 | 99 | 528 |
| | ಬೆಂಗಳೂರು ದಕ್ಷಿಣ | 174 | 222 | 131 | 527 |
| | ಆನೇಕಲ್ | 36 | 150 | 58 | 224 |
| | **ಒಟ್ಟು** | **596** | **830** | **508** | **1934** |
| **ಬೆಂಗಳೂರು ಗ್ರಾಮಾಂತರ** | ದೇವನಹಳ್ಳಿ | 130 | 160 | 120 | 410 |
| | ದೊಡ್ಡಬಳ್ಳಾಪುರ | 10 | 15 | 13 | 38 |
| | ಹೊಸಕೋಟೆ | 350 | 400 | 122 | 872 |
| | ನೆಲಮಂಗಲ | 12 | 10 | 5 | 27 |
| | **ಒಟ್ಟು** | **502** | **585** | **260** | **1347** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ಸದರಿ ಭೂಮಿಯ ಅಂದಾಜು ಮೌಲ್ಯವೆಷ್ಟು; ಒತ್ತುವರಿ ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು; (ಪ್ರಕರಣವಾರು ಮಾಹಿತಿ ನೀಡುವುದು) | ಸದರಿ ಭೂಮಿಯ ಅಂದಾಜು ಮೌಲ್ಯವು ನೋಂದಣಿ ಮತ್ತು ಮುದ್ರಾಂಕ ಇಲಾಖೆಯು ನಿಗದಿಪಡಿಸುವ ಮಾರ್ಗಸೂಚಿ/ಮಾರುಕಟ್ಟೆ ಮೌಲ್ಯಕ್ಕೆ ಅನುಗುಣವಾಗಿರುತ್ತದೆ.<br><br>ಕಂದಾಯ ಇಲಾಖೆಯಡಿ ಬರುವ ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸಲು ರಾಜ್ಯದ ಎಲ್ಲಾ ಜಿಲೆಗಳಲ್ಲಿ, ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಕಾರ್ಯ ಪಡೆಗಳನ್ನು ರಚಿಸಲಾಗಿದೆ. ಅದರಂತೆ ಎಲ್ಲಾ ಜಿಲ್ಲಾಧಿಕಾರಿಗಳು ಕಾಲಬದ್ಧ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಂಡು, ಒತ್ತುವರಿ ಆಗಿರುವ ಸರ್ಕಾರಿ ಜಮೀನುಗಳನ್ನು ತೆರವುಗೊಳಿಸಲು ಕ್ರಮವಹಿಸುತ್ತಿದ್ದಾರೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 20 ಎಲ್‌ಜಿಪಿ 2020, ದಿ: 20.01.2020 ರಂತೆ ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲರಾಗಿರುವ ಅಧಿಕಾರಿಗಳು /ಭೂ ಕಬಳಿಕೆಗೆ ದುಷ್ಪ್ರೇರಣೆ ನೀಡಲು ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮೀಲಾಗಿರುವ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕಾನೂನು/ಶಿಸ್ತು ಕ್ರಮಗಳನ್ನು ಜರುಗಿಸಲು ಸೂಚನೆ ನೀಡಲಾಗಿದೆ. |
| ಇ) | ಇಲ್ಲಿಯವರೆಗೆ ಎಷ್ಟು ಸರ್ಕಾರಿ ಭೂಮಿಯನ್ನು ಮರುವಶಪಡಿಸಿಕೊಳ್ಳಲಾಗಿದೆ; ಪ್ರಕರಣವಾರು ಹಾಗೂ ವಶಪಡಿಸಿಕೊಂಡ ಭೂಮಿಯನ್ನು ಯಾವ ಉದ್ದೇಶಕ್ಕೆ ಬಳಸಲಾಗಿದೆ ಮತ್ತು ಬಳಸಿಕೊಳ್ಳಲು ಉದ್ದೇಶಿಸಲಾಗಿದೆ; (ಪ್ರಕರಣವಾರು ಮಾಹಿತಿ ನೀಡುವುದು) | ಬೆಂಗಳೂರು ನಗರ ಜಿಲ್ಲೆಯಲ್ಲಿ 1,22,918 ಎಕರೆ/ಗುಂಟೆ ಸರ್ಕಾರಿ ಜಮೀನಿದ್ದು, ಇದರಲ್ಲಿ 38,947 ಎಕರೆ/ಗುಂಟೆ ಸರ್ಕಾರಿ ಜಮೀನು ಒತ್ತುವರಿ ಇದೆ. 16,487 ಎಕರೆ/ಗುಂಟೆ ಸರ್ಕಾರಿ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ. ಉಳಿದಂತೆ 261 ಎಕರೆ/ಗುಂಟೆ ಜಮೀನನ್ನು ಒತ್ತುವರಿ ತೆರವುಗೊಳಿಸಲು ಬಾಕಿ ಇದೆ.<br><br>ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 1,08,295 ಎಕರೆ/ಗುಂಟೆ ಸರ್ಕಾರಿ ಜಮೀನಿದ್ದು, ಇದರಲ್ಲಿ 9,433-00 ಎಕರೆ/ಗುಂಟೆ ಸರ್ಕಾರಿ ಜಮೀನು ಒತ್ತುವರಿ ಇದೆ. 8603-00 ಎಕರೆ/ಗುಂಟೆ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದ್ದು, ಉಳಿದಂತೆ 830-00 ಎಕರೆ/ಗುಂಟೆ ಜಮೀನನ್ನು ಒತ್ತುವರಿ ತೆರವುಗೊಳಿಸಲು ಬಾಕಿ ಇದೆ. |

| | | |
|---|---|---|
| | | ಒತ್ತುವರಿಯಿಂದ ತೆರವುಗೊಳಿಸಲಾದ ಸರ್ಕಾರಿ ಜಮೀನನ್ನು ಸಾರ್ವಜನಿಕ ಉದ್ದೇಶಗಳಾದ ಸ್ಮಶಾನ, ರಾಜೀವ ಗಾಂಧಿ ವಸತಿ ನಿಗಮ ನಿಯಮಿತ, ಶಾಲೆ, ಆಟದ ಮೈದಾನ, ಉದ್ಯಾನದಂತಹ ಅನೇಕ ಜನಪರ ಕಾರ್ಯಕ್ರಮಗಳಿಗೆ ಕಾಯ್ದಿರಿಸಲಾಗುತ್ತಿದೆ. |
| ಈ) | ಸರ್ಕಾರಿ ಭೂಮಿ ಒತ್ತುವರಿ ತಡೆಯಲು ಮತ್ತು ಸರ್ಕಾರಿ ಭೂಮಿಯನ್ನು ಸಂರಕ್ಷಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು? | ರಾಜ್ಯಾದ್ಯಂತ ಒಟ್ಟು 63,32,486 ಎಕರೆ/ಗುಂಟೆ ಸರ್ಕಾರಿ ಜಮೀನಿದ್ದು, ಇದರಲ್ಲಿ 14,72,493 ಎಕರೆ/ಗುಂಟೆ ಸರ್ಕಾರಿ ಜಮೀನು ಒತ್ತುವರಿ ಇದೆ. ವಿವಿಧ ನ್ಯಾಯಾಲಯಗಳಲ್ಲಿರುವ ಪ್ರಕರಣಗಳು, ಅಕ್ರಮ ಸಕ್ರಮ ಯೋಜನೆ ಮತ್ತು ಸಾರ್ವಜನಿಕ ಉದ್ದೇಶಗಳಿಗೆ ಬಳಕೆಯಾಗಿರುವ ಒಟ್ಟು 10,82,752 ಎಕರೆ/ಗುಂಟೆ ಜಮೀನು ಹೊರತುಪಡಿಸಿ, ಉಳಿದಂತೆ 3,89,741 ಎಕರೆ/ಗುಂಟೆ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಬೇಕಾಗಿರುತ್ತದೆ. ಇದರಲ್ಲಿ 2,73,778 ಎಕರೆ/ಗುಂಟೆ ಸರ್ಕಾರಿ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ. ಉಳಿದಂತೆ 1,15,963 ಎಕರೆ/ಗುಂಟೆ ಜಮೀನನ್ನು ಒತ್ತುವರಿ ತೆರವುಗೊಳಿಸಲು ಬಾಕಿ ಇದೆ.<br><br>ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ಅಕ್ಟೋಬರ್-2023ರ ಅಂತ್ಯಕ್ಕೆ ಒಟ್ಟು 21,712 ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 16,205 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. 5,507 ಪ್ರಕರಣಗಳು ಬಾಕಿ ಇದೆ. ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ವಿವಿಧ ಪ್ರಕರಣಗಳಲ್ಲಿ ಈವರೆಗೂ 75 ಜನರಿಗೆ ಒಂದು ವರ್ಷದಂತೆ ಶಿಕ್ಷೆ ಹಾಗೂ ದಂಡ ವಿಧಿಸಲಾಗಿದೆ.<br><br>ಒತ್ತುವರಿ ಪ್ರಕರಣಗಳನ್ನು ಸಮರ್ಥವಾಗಿ ತಡೆಯುವ ಸಲುವಾಗಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವನ್ನು ರಚಿಸಲಾಗಿದೆ. ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲದಲ್ಲಿ, ಪ್ರಕರಣವನ್ನು ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 192-ಎ ರನ್ವಯ ದಾಖಲಿಸಲಾಗುತ್ತಿದೆ ಹಾಗೂ ಅಕ್ರಮವಾಗಿ ಪರಭಾರೆ ಮಾಡುತ್ತಿರುವವರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ FIR ದಾಖಲಿಸಲಾಗುತ್ತಿದೆ.<br><br>ಯಾವುದೇ ಹೊಸ ಸರ್ವೆ ನಂಬರ್ ಸೃಜಿಸಲು ಅಥವಾ ಸರ್ವೆ ನಂಬರ್ ತೆಗೆದುಹಾಕಲು (ಡಿಲೀಷನ್) ಮಾಡಲು ಭೂಮಿತಂತ್ರಾಂಶದಲ್ಲಿ ಜಿಲ್ಲಾಧಿಕಾರಿಗಳು ಅಥವಾ ಉಪವಿಭಾಗಾಧಿಕಾರಿಯವರ ಆದೇಶ ದೊಂದಿಗೆ ಕ್ರಮವಹಿಸಲು ಅವಕಾಶವನ್ನುನೀಡಲಾಗಿದೆ.<br><br>ಯಾವುದೇ ಭೂಮಂಜೂರಾತಿ ಸಂದರ್ಭದಲ್ಲಿ ನಮೂನೆ 1 ರಿಂದ 5 ತುಂಬಲು ಇದ್ದ Manual ಪದ್ಧತಿಯನ್ನು ತೆಗೆದುಹಾಕಿದ್ದು ತಂತ್ರಾಂಶದ ಮೂಲಕ ಭರ್ತಿ ಮಾಡಲು ಅವಕಾಶ ಮಾಡಲಾಗಿದೆ.<br><br>ಯಾವುದೇ ಸರ್ಕಾರಿ ಭೂಮಿ ಮೇಲೆ ಅನಧಿಕೃತವಾಗಿ ಮಾಡಿರುವ ಖಾತೆ ಬದಲಾವಣೆಯ ಸಂಬಂಧ ಕರ್ನಾಟಕ ಭೂಕಂದಾಯ ಕಾಯ್ದೆ-1964ರ ಕಲಂ 136(3)ರಡಿ ಜಿಲ್ಲಾಧಿಕಾರಿಗಳು ಸುಮೋಟೊ ಪ್ರಕರಣ ದಾಖಲಿಸಿ ವಿಚಾರಣೆಗೆ ಅವಕಾಶವಿರುತ್ತದೆ. |

ಸಂಖ್ಯೆ: ಆರ್‌ಡಿ 140 ಎಲ್‌ಜಿಕ್ಯೂ 2023

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು